# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 930

2 ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)

3 ಉತ್ತರಿಸುವ ದಿನಾಂಕ : 22-02-2024

4 ಉತ್ತರಿಸುವವರು : ಉಪ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಲುಕ್ಯ ವೃತ್ತದಿಂದ ಮೇಖ್ರಿ ವೃತ್ತದವರೆಗೆ ಸಂಚಾರಿ ದಟ್ಟಣೆ ಕಡಿಮೆ ಮಾಡಲು ಮೇಲು ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಬಿಟ್ಟಿರುವುದು ನಿಜವೇ ಇದಕ್ಕೆ ಕಾರಣವೇನು; | ಹೌದು.<br>ಅಧಿಕ ಭೂ-ಸ್ವಾಧೀನ ವೆಚ್ಚ ಮತ್ತು ಮರಗಳನ್ನು ತೆರವುಗೊಳಿಸುವಿಕೆಗೆ ಸಾರ್ವಜನಿಕರಿಂದ ಆಕ್ಷೇಪ ಹಿನ್ನೆಲೆಯಲ್ಲಿ ಮೇಲು ರಸ್ತೆ ನಿರ್ಮಾಣ ಕಾಮಗಾರಿಯನ್ನು ಪ್ರಸ್ತುತ ಸನ್ನಿವೇಶದಲ್ಲಿ ಕೈಬಿಡಲಾಗಿರುತ್ತದೆ. |
| ಆ) | ಈ ರಸ್ತೆಯಲ್ಲಿನ ಸಂಚಾರಿ ದಟ್ಟಣೆಯನ್ನು ಕಡಿಮೆ ಮಾಡಲು ಸರ್ಕಾರ ಯಾವ ಪರ್ಯಾಯ ಮಾರ್ಗವನ್ನು ರೂಪಿಸಿದೆ; (ವಿವರ ನೀಡುವುದು) | ಪ್ರಸ್ತುತ, "ಬ್ರ್ಯಾಂಡ್ ಬೆಂಗಳೂರು" ಸುಗುಮ ಸಂಚಾರ ಶೀರ್ಷಿಕೆ ಅಡಿಯಲ್ಲಿ ಬೆಂಗಳೂರು ನಗರದ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸಲು Bengaluru City Comprehensive Mobility Plan (BCCMP) ಅನ್ನು ರೂಪಿಸಲಾಗುತ್ತಿದ್ದು, ಇದಕ್ಕಾಗಿ ಮೆ॥ ಅಲ್‌ಟಿನಾಕ್ ಇಂಡಿಯಾ ಪ್ರೈ ಲಿ., ಸಂಸ್ಥೆಗೆ ಸಮಗ್ರ ಸಂಚಾರ ಅಧ್ಯಯನಕ್ಕೆ ಟೆಂಡರ್ ನೀಡಲಾಗಿದೆ. ಸದರಿ ಯೋಜನೆಯಲ್ಲಿ ಟನಲ್ (Tunnel) ನಿರ್ಮಾಣವು ಸೇರಿದಂತೆ, ವಿವಿಧ ಮಾರ್ಗೋಪಾಯಗಳನ್ನು ಅವಲೋಕಿಸಲಾಗುತ್ತಿದ್ದು, ಶೀಘ್ರದಲ್ಲಿ ಪರ್ಯಾಯ ಮಾರ್ಗ / ಸೂತ್ರಗಳನ್ನು ರೂಪಿಸಲಾಗುತ್ತಿದೆ. |
| ಇ) | ಪರ್ಯಾಯ ಮಾರ್ಗವನ್ನು ಯಾವ ವರ್ಷದಿಂದ ಜಾರಿಗೆ ತರಲು ಸರ್ಕಾರ ತೀರ್ಮಾನಿಸಿದೆ? | ಪರ್ಯಾಯ ಮಾರ್ಗವನ್ನು ಅತಿ ಜರೂರಾಗಿ ಜಾರಿಗೆ ತರಲು ಉದ್ದೇಶಿಸಲಾಗಿದೆ. |

**ಸಂಖ್ಯೆ: ನಅಇ 79 ಎಂಎನ್‌ವೈ 2024 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ